# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 717 |
| 2 | ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| 3 | ಉತ್ತರಿಸುವ ಸಚಿವರು | : | ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು |
| 4 | ಉತ್ತರಿಸಬೇಕಾದ ದಿನಾಂಕ | : | 17.09.2021 |

| ಪ್ರಶ್ನೆ | ಉತ್ತರ |
|---|---|
| ಅ) ವಿಜಯಪುರ ಜಿಲ್ಲೆಯಲ್ಲಿ ದಾಳಿಂಬೆ ಹಾಗೂ ದ್ರಾಕ್ಷಿಯನ್ನು ಎಷ್ಟು ಹೆಕ್ಟರ್ ಪ್ರದೇಶಗಳಲ್ಲಿ ಬೆಳೆಯಲಾಗಿದೆ. | ವಿಜಯಪುರ ಜಿಲ್ಲೆಯಲ್ಲಿ ದಾಳಿಂಬೆ ಬೆಳೆಯನ್ನು 4820 ಹೆಕ್ಟೇರ್ ಹಾಗೂ ದ್ರಾಕ್ಷಿ ಬೆಳೆಯನ್ನು 17122 ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯಲಾಗಿದೆ. |
| ಆ) ದಾಳಿಂಬೆ ಬೆಳೆಗೆ ದುಂಡಾಣು ರೋಗ ಹಾಗೂ ಇನ್ನಿತರ ರೋಗಗಳಿಂದ ದಾಳಿಂಬೆ ಬೆಳೆ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದಕ್ಕೆ ಕೈಗೊಂಡಿರುವ ಪರಿಹಾರ ಕ್ರಮಗಳೇನು? (ಮಾಹಿತಿ ಒದಗಿಸುವುದು) | ಸರ್ಕಾರದ ಗಮನಕ್ಕೆ ಬಂದಿದೆ.<br>ಈ ಕೆಳಕಂಡಂತೆ ಪರಿಹಾರ ಕ್ರಮ ಕೈಗೊಳ್ಳಲಾಗಿದೆ.<br>1. ದಾಳಿಂಬೆ ಬೆಳೆಗೆ ತಗಲುವ ದುಂಡಾಣು ಅಂಗಮಾರಿ ರೋಗ,ಸೊರಗು ರೋಗ ಮತ್ತು ಚಿಬ್ಬು ರೋಗಗಳ ನಿಯಂತ್ರಣದ ಬಗ್ಗೆ ಸೂಕ್ತ ತಾಂತ್ರಿಕ ಸಲಹೆ ಮತ್ತು ಸೂಚನೆಗಳು ಹಾಗೂ ಕೈಗೊಳ್ಳಬೇಕಾದ ಮುಂಜಾಗೃತ ಕ್ರಮಗಳ ಬಗ್ಗೆ ರೈತರಿಗೆ ಮಾಹಿತಿ ಒದಗಿಸಲಾಗುತ್ತಿದೆ.<br>2. ರಾಜ್ಯವಲಯದ ತೋಟಗಾರಿಕೆ ಬೆಳೆಗಳಿಗೆ ತಗಲುವ ಕೀಟ ಮತ್ತು ರೋಗಗಳ ಸಮಗ್ರ ನಿಯಂತ್ರಣ ಯೋಜನೆಯಡಿ ತೋಟಗಾರಿಕೆ ಬೆಳೆಗಳಿಗೆ ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ಶೇ.75 ರಷ್ಟು (ರೂ.7500/ಹೆ.) ಹಾಗೂ ಪ.ಜಾ/ಪ.ಪಂ. ವರ್ಗದ ಫಲಾನುಭವಿಗಳಿಗೆ ಶೇ.90ರಷ್ಟು (ರೂ.9000/ಹೆ.) ರಂತೆ ಗರಿಷ್ಠ 2 ಹೆಕ್ಟೇರ್ ವರೆಗೆ ಮಾತ್ರ ಸಹಾಯಧನ ಒದಗಿಸಲಾಗುತ್ತಿದೆ.<br>3. ರಾಷ್ಟ್ರೀಯ ತೋಟಗಾರಿಕೆ ಮಿಷನ್ (NHM) ಯೋಜನೆಯಡಿ ಸಮಗ್ರ ಕೀಟ ಮತ್ತು ರೋಗಗಳ ನಿರ್ವಹಣೆ (IPM/INM) ಕಾರ್ಯಕ್ರಮದಡಿ ರೂ.4000/ಹೆ. ಘಟಕ ವೆಚ್ಚಕ್ಕೆ ಶೇ.30ರಂತೆ ರೂ.1200/ಹೆ. ಗೆ ಗರಿಷ್ಠ 4 ಹೆ. ವರೆಗೆ ಸಹಾಯಧನ ನೀಡಲಾ ಗುತ್ತಿದೆ. |

No.HORTI 375 HGM 2021

(ಮುನಿರತ್ನ)
ತೋಟಗಾರಿಕೆ ಮತ್ತು ಯೋಜನೆ, ಕಾರ್ಯಕ್ರಮ
ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು.